# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀಮತಿ ಎನ್. ಉಷಾ, ಪಂಚಾಯಿತಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಲಕ್ಕೊಂಡಹಳ್ಳಿ ಗ್ರಾಮ ಪಂಚಾಯಿತಿ, ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:**
1. ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ:ಕಂಪ್ಲೇಂಟ್/ಉಪಲೋಕ್/ಬಿಡಿ–4261/2015/ಎಆರ್‌ಎಲ್‌ಓ–2, ದಿನಾಂಕ: 09–05–2017.
2. ಮಾನ್ಯ ಉಪಲೋಕಾಯಕ್ತರವರ ವರದಿ ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ ಬಿಡಿ–4261/2015/ಸನಿಕಾಸ–2, ದಿನಾಂಕ: 20–03–2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು, ನಿಬಂಧಕರು ಕರ್ನಾಟಕ ಲೋಕಾಯುಕ್ತ ಇವರ ಪತ್ರದ ಸಂಗಡ ಲಗತ್ತಿಸಿರುವ ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಸೆಕ್ಷನ್ 12(3) ರ ಅಡಿಯಲ್ಲಿ ಸಲ್ಲಿಸಿರುವ ದಿನಾಂಕ: 20.03.2017 ರ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ. ಮಾನ್ಯ ಅಪರ ಪೊಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳರು ಇವರು ಬೆಂಗಳೂರು ಗ್ರಾಮಾಂತರ ಲೋಕಾಯುಕ್ತ ಪೊಲೀಸ್ ಠಾಣೆಯ ಪೊಲೀಸ್ ನಿರೀಕ್ಷಕರು (ಇನ್ನು ಮುಂದೆ ದೂರುದಾರರು ರಂದು ಕರೆಯಲ್ಪಡುತ್ತಾರೆ) ತನಿಖಾ ವರದಿ ಮತ್ತು ಸಂಬಂಧಿಸಿದ ದಾಖಲೆಗಳೊಂದಿಗೆ ಸಲ್ಲಿಸಿದ ವರದಿಯಲ್ಲಿ ಶ್ರೀಮತಿ ಎನ್. ಉಷಾ, ಪಂಚಾಯಿತಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಲಕ್ಕೊಂಡಹಳ್ಳಿ ಗ್ರಾಮ ಪಂಚಾಯಿತಿ, ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, (ಇನ್ನು ಮುಂದೆ ಎದುರುದಾರರು ರಂದು ಕರೆಯಲ್ಪಡುತ್ತಾರೆ) ಸಾರ್ವಜನಿಕ/ಸರ್ಕಾರಿ ನೌಕರರಾಗಿದ್ದು, ದುರ್ನಡತೆ ತೋರಿಸಿರುವುದಾಗಿ ವರದಿ ಸಲ್ಲಿಸಿದ ಮೇರೆಗೆ, ದಾಖಲೆಗಳನ್ನು ಪರಿಶೀಲಿಸಿದಾಗ, ಎದುರುದಾರರು ದುರ್ನಡತೆ ತೋರಿಸಿರುವುದು ಮೇಲ್ನೋಟಕ್ಕೆ ಕಂಡು ಬಂದಿದ್ದರಿಂದ, ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 9 ರಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆ.

**ದೂರಿನ ಸಂಕ್ಷಿಪ್ತ ವಿವರಣೆ:**

ದೂರುದಾರರು ತಮ್ಮ ದೂರಿನಲ್ಲಿ ಹೊಸಕೋಟೆ ತಾಲ್ಲೂಕು, ಲಕ್ಕೊಂಡಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾದ ಎದುರುದಾರರು, ದೂರುದಾರರು ಹೊಸಕೋಟೆ ತಾಲ್ಲೂಕಿನಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಕಾಮಗಾರಿಗಳನ್ನು ನಿರ್ವಹಿಸಲು ಲೈಸನ್ಸ್ ಹೊಂದಿದ್ದು ತಾಲ್ಲೂಕಿನ ಲಕ್ಕೊಂಡಹಳ್ಳಿ ಹಸಿಗಾಳ್ ಮತ್ತು ಕಮ್ಮಸಂದ್ರ ಗ್ರಾಮಗಳಲ್ಲಿ ಪೈಪ್‌ಲೈನ್ ಇತ್ಯಾದಿ ಕಾಮಗಾರಿಗಳಿಗೆ ಸಂಬಂಧಪಟ್ಟಂತೆ 3,80,000/– ರೂಗಳ ಕೆಲಸವನ್ನು ಮಾಡಿರುತ್ತಾರೆ. ಗ್ರಾಮ ಪಂಚಾಯಿತಿಯಿಂದ ಇವರಿಗೆ ಹಣ ಬರಬೇಕಾಗಿದ್ದು ಆದರೆ ಎದುರುದಾರರು ಹಣ ಮಂಜೂರು ಮಾಡಲು ಶೇ14 ರಷ್ಟು ಲಂಚ ನೀಡಬೇಕೆಂದು ಚೆಕ್‌ಗಳನ್ನು ನೀಡಿರುತ್ತಾರೆ. ದೂರುದಾರರು ಈಗಾಗಲೇ 30,000/– ರೂಗಳನ್ನು ಮುಂಗಡವಾಗಿ ನೀಡಿದ್ದು ಬಾಕಿ 23,200/– ರೂಗಳ ಲಂಚ ನೀಡುವಂತೆ ದಿ:02.09.2014 ರಂದು ಪೋನ್ ಮಾಡಿ ಕೇಳೀ ಎದುರುದಾರರು ಕರ್ತವ್ಯಲೋಪವೆಸಗಿದ್ದಾರೆಂದು ದೂರು ಸಲ್ಲಿಸಿರುತ್ತಾರೆ.

ಎದುರುದಾರರು ಲಂಚಕೇಳಿದ ವಿಷಯವನ್ನು ದೂರುದಾರರು ಧ್ವನಿ ಮುದ್ರಿಸಿಕೊಂಡು ಬೆಂಗಳೂರು ಗ್ರಾಮಾಂತರ ಲೋಕಾಯುಕ್ತ ಪೊಲೀಸ್ ಠಾಣೆಗೆ ನೀಡಿದ್ದು, ಅದರ ಆಧಾರದ ಮೇಲೆ ಎದುರುದಾರರ ವಿರುದ್ಧ ಠಾಣಾ ಮೊ.ಸಂ23/14 ಲಂಚನಿರೋಧಕ ಕಾಯ್ದೆ 1988 ಕಲಂ7, 13(1)(ಡಿ) ಸಹವಾಚಕ ಕಲಂ13(2) ರಡಿಯಲ್ಲಿ ಪ್ರಕರಣ ದಾಖಲಿಸಿರುತ್ತಾರೆ.

ತನಿಖಾಧಿಕಾರಿಗಳು ದಿ:08.09.2014 ರಂದು ಸಾಯಂಕಾಲ 4–45 ಗಂಟೆಗೆ ಎದುರುದಾರರು ದೂರುದಾರರ ಮೋಟರ್ ಸೈಕಲ್ ನಲ್ಲಿ ಲಕ್ಕೊಂಡಹಳ್ಳಿಯಿಂದ ಹೊಸಕೋಟೆಯವರೆಗೆ ಡ್ರಾಪ್ ಪಡೆದು ಹೊಸಕೋಟೆಯ ಶ್ರೀ ಅವಿ ಮುಕ್ತೇಶ್ವರ ದೇವಸ್ಥಾನದ ಬಲಭಾಗದಲ್ಲಿ ದೂರುದಾರರಿಂದ ಲಂಚ ಸ್ವೀಕರಿಸಿದ್ದು, ಆಗ

ಲೋಕಾಯುಕ್ತ ಪೋಲೀಸರು ದಾಳಿ ಮಾಡಿದಾಗ ಎದುರುದಾರರು ದೂರುದಾರರಿಂದ ರೂ.20000/- ಲಂಚದ ಹಣವನ್ನು ಪಡೆದು ಸಿಕ್ಕಿಬಿದ್ದಿರುತ್ತಾರೆ. ತನಿಖಾಧಿಕಾರಿಗಳು 20000/- ಲಂಚದದ ಹಣವನ್ನು ಪಂಚರ ಸಮಕ್ಷಮ ಜಪ್ತು ಮಾಡಿಕೊಂಡು ಸ್ಥಳದಲ್ಲೇ ಪಂಚನಾಮೆ ಜರಗಿಸಿ ಎದುರುದಾರರನನು ಬಂಧಿಸಿರುತ್ತಾರೆ. ಆನಂತರ ತನಿಖಾಧಿಕಾರಿಗಳು ಸಾಕ್ಷಿಧಾರರ ಹೇಳಿಕೆಗಳನ್ನು ಪಡೆದು, ರಾಸಾಯನಿಕ ಪರೀಕ್ಷಾ ಚರದಿ ಪಡದು ಎದುರುದಾರರ ವಿರುದ್ಧ ಮೇಲ್ನೋಟಕ್ಕೆ ಪ್ರಕರಣ ಕಂಡುಬಂದ ಕಾರಣ ದೋಷಾರೋಪಣ ಪಟ್ಟಿ ಸಲ್ಲಿಸಿರುತ್ತಾರೆ.

ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ದೂರಿನಲ್ಲಿನ ಆಪಾದನೆಗಳನ್ನು ಅಲ್ಲಗಳೆದು ತಾನು ಯಾವತ್ತೂ ದೂರುದಾರರಿಂದ 20000/- ರೂಗಳ ಲಂಚದ ಹಣ ಪಡೆದಿರುವುದಿಲ್ಲ. ಆದ್ದರಿಂದ ಸದರಿ ಪ್ರಕರಣವನ್ನು ಮುಕ್ತಾಯಗೊಳಸಬೇಕೆಂದು ಕೇಳಿಕೊಂಡಿದ್ದಾರೆ.

ದೂರುದಾರರು ಹಾಜರುಪಡಿಸಿದ ದೂರು ಮತ್ತು ದಾಖಲಾತಿಗಳು, ಆಕ್ಷೇಪಣೆ, ದೋಷರೋಪಣಾ ಪಟ್ಟಿಯನ್ನು ಪರಿಶೀಲಿಸಿದಾಗ, ಎದುರುದಾರರು ಹಣ ಮಂಜೂರು ಮಾಡಲು ದೂರುದಾರರಿಂದ 20000/- ರೂಗಳ ಲಂಚದ ಹಣ ಪಡೆದುಕೊಂಡಾಗ ತನಿಖಾಧಿಕಾರಿಗಳು ದಾಳಿ ಮಾಡಿ ಜಪ್ತು ಮಾಡಿಕೊಂಡಿರುತ್ತಾರೆ. ಆಗ ಎದುರುದಾರರು ಸಮರ್ಪಕ ಉತ್ತರ ನೀಡದ ಕಾರಣ ಪಂಚರ ಸಮಕ್ಷಮ ಪಂಚನಾಮೆ ಮಾಡಿ, ಆನಂತರ ತನಿಖೆ ಕೈಗೊಂಡು ಸಾಕ್ಷಿದಾರರ ಹೇಳಿಕೆಗಳನ್ನು ಪಡೆದು ಪರಿಶೀಲಿಸಿದಾಗ ಎದುರುದಾರರ ವಿರುದ್ಧ ಮೇಲ್ನೋಟಕ್ಕೆ ಪ್ರಕರಣ ಕಂಡುಬಂದಿರುತ್ತದೆ. ಈಗಾಗಲೇ ತನಿಖಾಧಿಕಾರಿಗಳು ಈ ಪ್ರಕರಣದ ಬಗ್ಗೆ ಸಂಪೂರ್ಣ ತನಿಖೆ ಮಾಡಿ ದೋಷಾರೋಪಣಾ ಪಟ್ಟಿಯನ್ನು ನ್ಯಾಯಾಲಯಕ್ಕೆ ಅದರ ಒಂದು ಪ್ರತಿಯನ್ನು ಈ ಪ್ರಕರಣದಲ್ಲಿ ಸಲ್ಲಿಸಿರುವುದರಿಂದ, ಎದುರುದಾರರು ಲಂಚ ಪಡೆದು ಕರ್ತವ್ಯದುರುಪಯೋಗ ಪಡಿಸಿಕೊಂಡಿದ್ದಾರೆಂದು ಮೇಲ್ನೋಟಕ್ಕೆ ಕಂಡುಬರುತ್ತದೆ.

ಆದ್ದರಿಂದ ಎದುರುದಾರರು ಸಾರ್ವಜನಿಕ/ ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ಪರಿಪಾಲನೆಯಲ್ಲಿ ನಿಷ್ಠೆಯನ್ನು ತೋರದೇ, ಕರ್ತವ್ಯಲೋಪವೆಸಗಿ, ದುರ್ವರ್ತನೆ ತೋರಿಸಿ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966ರ ನಿಯಮ 3(1) ಶಿಸ್ತು ಕ್ರಮಕ್ಕೆ ಭಾಧ್ಯರಾಗಿರುತ್ತಾರೆಂದು ಕಂಡು ಬಂದಿರುತ್ತದೆ. ಆದುದರಿಂದ, ಎದುರುದಾರರ ವಿರುದ್ಧ ಶಿಸ್ತು ನಡವಳಿಕೆ ಹೂಡಲು ಮತ್ತು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14-ಎ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಈ ಪ್ರಾಧಿಕಾರಕ್ಕೆ ಒಪ್ಪಿಸುವಂತೆ, ಕರ್ನಾಟಕ ಲೋಕಾಯುಕ್ತ ಕಯ್ದೆಯ ಕಲಂ 12(3) ರನ್ವಯ ಪ್ರದತ್ತವಾದ ಅಧಿಕಾರದಡಿ, ಶಿಸ್ತು ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಿದೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/439/ಗ್ರಾಪಂಕಾ/2017 ಬೆಂಗಳೂರು, ದಿನಾಂಕ: 02-06-2017.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ಎನ್. ಉಷಾ, ಪಂಚಾಯಿತಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಲಕ್ಕೊಂಡಹಳ್ಳಿ ಗ್ರಾಮ ಪಂಚಾಯಿತಿ, ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

<u>ಗೆ,</u>

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಪುಟ ಸಂಖ್ಯೆ 1 ರಿಂದ 240 ರವರೆಗಿನ ಮೂಲದಾಖಲೆಗಳನ್ನು ಈ ಪತ್ರದೊಂದಿಗೆ ಹಿಂದಿರುಗಿಸಲಾಗಿದೆ)
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ,
6. ಶ್ರೀಮತಿ ಎನ್. ಉಷಾ, ಪಂಚಾಯಿತಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಲಕ್ಕೊಂಡಹಳ್ಳಿ ಗ್ರಾಮ ಪಂಚಾಯಿತಿ, ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ,
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.
8. ಗಣಕ ಕೋಶ.